ಈ) ಸಂಚಾರ ದಟ್ಟಣೆಯಿಂದ ವಾಹನ ಸವಾರರು ಹಾಗೂ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ತಪ್ಪಿಸಲು ಸ್ಥಳೀಯ ಪೊಲೀಸರನ್ನು ಬಳಸಿಕೊಳ್ಳುತ್ತಿರುವುದರಿಂದ ನಗರದಲ್ಲಿ ಪೊಲೀಸರ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ;

ಉ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

ಅ) ಹೌದು

ಆ) ಮತ್ತು ಇ) ಯಾದಗಿರಿ ನಗರದಲ್ಲಿ ಸಂಚಾರಿ ಪೊಲೀಸ್ ಠಾಣೆ ತೆರೆಯುವ ಪ್ರಸ್ತಾವನೆಯನ್ನು ಸ್ವೀಕರಿಸಿದ್ದು, ಪರಿಶೀಲಿಸಲಾಗುತ್ತಿದೆ.

ಈ) ಹೌದು.

ಉ) ಯಾದಗಿರಿ ಜಿಲ್ಲಾ ಕೇಂದ್ರವಾಗಿರುವುದರಿಂದ, ಈ ಪ್ರಸ್ತಾವನೆಯನ್ನು ಪರಿಗಣಿಸುವ ಕುರಿತು ಪರಿಶೀಲಿಸಲಾಗುತ್ತಿದೆ.

ಖಾಯಂ ಅಧಿಕಾರಿಗಳ ನೇಮಕ

35(239) ಡಾ॥ ಮಾಲಕರೆಡ್ಡಿ ಎ.ಬಿ. (ಯಾದಗಿರಿ)

ಅ) ಯಾದಗಿರಿ ಜಿಲ್ಲೆ ರಚನೆಯಾಗಿ 5 ವರ್ಷಗಳಾಗುತ್ತಿದ್ದರೂ ಜಿಲ್ಲೆಯಲ್ಲಿ ಜಿಲ್ಲಾ ಮಟ್ಟದ ಬಹುತೇಕ ಇಲಾಖೆಗಳಿಗೆ ಪ್ರಭಾರ ಅಧಿಕಾರಿಗಳು ನೇಮಕಗೊಂಡಿದ್ದು ಖಾಯಂ ಅಧಿಕಾರಿಗಳಿಲ್ಲದೆ ಅಭಿವೃದ್ಧಿ ಕೆಲಸಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಈ ಪ್ರಭಾರ ಅಧಿಕಾರಿಗಳು ತಮ್ಮ ಮೂಲ ಹುದ್ದೆಯ ಜಿಲ್ಲೆಗಳಲ್ಲಿ ಕೆಲಸದಲ್ಲಿ ತಲ್ಲೀನರಾಗಿ ಪ್ರಭಾರ ಹುದ್ದೆ ಹೊಂದಿದ ಯಾದಗಿರಿ ಜಿಲ್ಲಾ ಕೆಲಸಗಳಿಗೆ ಗಮನ ಹರಿಸಲು ಸಾಧ್ಯವಾಗದೆ ಜನತೆಗೆ

ತೊಂದರೆಯಾಗಿದ್ದರೂ ಸರ್ಕಾರ ಈ ತನಕ ಖಾಯಂ ಅಧಿಕಾರಿಗಳನ್ನು ನೇಮಿಸಲು ಕ್ರಮ ವಹಿಸದೇ ಇರುವುದಕ್ಕೆ ಕಾರಣಗಳೇನು?

ಇ) ಬಹುತೇಕ ಇಲಾಖೆಗಳಲ್ಲಿ ಪ್ರಧಾನ ಅಧಿಕಾರಿಗಳಿಲ್ಲದೇ "ಸಿ" ದರ್ಜೆಯ ನೌಕರಿಗಳಿಲ್ಲದೇ ಕಛೇರಿಗಳು ನಡೆಯುತ್ತಿದ್ದು, ನಿರ್ಧಾರ ತೆಗೆದುಕೊಳ್ಳಬೇಕಾದ ಅಧಿಕಾರಿಗಳಿಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರ ಗಮನಿಸಿಲ್ಲವೇ?

ಈ) ಕೆಲ ಕಛೇರಿಗಳಲ್ಲಿ ಕನಿಷ್ಠ ಸೌಲಭ್ಯಗಳಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಈ ಸಮಸ್ಯೆಗಳ ನಿವಾರಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿ)

ಅ) ಇಂದ ಇ) ಯಾದಗಿರಿ ಜಿಲ್ಲೆಯಲ್ಲಿ ಜಿಲ್ಲಾ ಮಟ್ಟದಲ್ಲಿನ 8 ಹುದ್ದೆಗಳಲ್ಲಿ ಪ್ರಭಾರ ವ್ಯವಸ್ಥೆ ಮಾಡಲಾಗಿದೆ. ಪ್ರಭಾರದಲ್ಲಿರುವ ಹೆಚ್ಚಿನ ಅಧಿಕಾರಿಗಳು ಯಾದಗಿರಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವವರೇ ಆಗಿರುತ್ತಾರೆ. ದೈನಂದಿನ ಕೆಲಸ ನಿರ್ವಹಿಸಲು ತೊಂದರೆ ಉಂಟಾಗದಂತೆ ಪ್ರಭಾರಿ ವ್ಯವಸ್ಥೆಗಳನ್ನು ಮಾಡಿರುವುದರಿಂದ ಕೆಲಸ ಕುಂಠಿತವಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 6 ರಕಾವ್ಯ 2012 (ಭಾಗ) ದಿನಾಂಕ: 23.02.2013ರಲ್ಲಿ ಅನುಚ್ಛೇದ 371 ಜೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ರಾಜ್ಯ ಮಟ್ಟದ ವೃಂದ ಮತ್ತು ಸ್ಥಳೀಯ ವೃಂದಗಳಲ್ಲಿ ಹುದ್ದೆಗಳನ್ನು ಗುರುತಿಸಿ ಮೀಸಲಾತಿ ನಿಗದಿಪಡಿಸುವವರೆಗೂ ಎಲ್ಲಾ ಇಲಾಖೆಗಳಲ್ಲಿ ಹುದ್ದೆಗಳನ್ನು ತುಂಬುವ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿತ್ತು. ಅನುಚ್ಛೇಧ 371(ಜೆ) ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸ್ಥಳೀಯ ವೃಂದವನ್ನು ರಚಿಸಿರುವ

ಇಲಾಖೆಗಳು ದಿನಾಂಕ: 07.02.2014ರ ತಿದ್ದುಪಡಿ ಆದೇಶದಂತೆ ಹುದ್ದೆಗಳನ್ನು ತುಂಬುವ ಪ್ರಕ್ರಿಯೆ ಪ್ರಾರಂಭಿಸಬಹುದೆಂದು ತಿಳಿದ ನಿರ್ಬಂಧವನ್ನು ಸಡಿಲಿಸಲಾಗಿದೆ. ಅನುಚ್ಛೇದ 371(ಜೆ) ಅನುಷ್ಠಾನದಿಂದ ಇಲಾಖೆಗಳಲ್ಲಿ ಖಾಲಿ ಹುದ್ದೆಗಳನ್ನು ತುಂಬುವ ಪ್ರಕ್ರಿಯೆ ವಿಳಂಬವಾಗಿದ್ದು ಈಗ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ವಿವಿಧ ಇಲಾಖೆಗಳಲ್ಲಿ ಕ್ರಮ ಪ್ರಗತಿಯಲ್ಲಿದೆ.

ಈ) ಮತ್ತು ಉ) ಯಾದಗಿರಿ ಜಿಲ್ಲೆಯನ್ನು ಹೊಸದಾಗಿ ರಚಿಸಿರುವುದರಿಂದ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಲು ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.

SCP/TSP ಫಲಾನುಭವಿಗಳು

36(110); ಡಾ॥ ಕೆ. ಶ್ರೀನಿವಾಸಮೂರ್ತಿ (ನೆಲಮಂಗಲ)

ಅ) 2012–13 ರಿಂದ 2014–15ನೇ ಸಾಲಿನಲ್ಲಿ ಖಅಕ/ಖಿಖಕ ಯೋಜನೆಯಡಿ ನೆಲಮಂಗಲ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು;

ಆ) ಈ ಫಲಾನುಭವಿಗಳನ್ನು ಕ್ರಮಬದ್ಧವಾಗಿ ಆಯ್ಕೆ ಮಾಡಿ ಸೌಲಭ್ಯವನ್ನು ಒದಗಿಸಲಾಗಿದೆಯೇ; [ಸಹಾಯಧನಗಳ ವಿವರ ನೀಡುವುದು];

ಇ) 2014–15ನೇ ಸಾಲಿನಲ್ಲಿ ಈ ಯೋಜನೆಯ ಆಯ್ಕೆಗೆ ನಿಗದಿಪಡಿಸಿರುವ ಗುರಿ ಎಷ್ಟು;

ಈ) ನೆಲಮಂಗಲ ವಿಧಾನ ಸಭಾ ಕ್ಷೇತ್ರಕ್ಕೆ ಈ ಸಾಲಿನಲ್ಲಿ ಹೊಸ ಪಶು ಚಿಕಿತ್ಸಾಲಯಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಉ) ನೆಲಮಂಗಲ ಕ್ಷೇತ್ರದ ಪಶು ಸಂಗೋಪನಾ ಇಲಾಖೆಗಳಲ್ಲಿ 'ಡಿ' ದರ್ಜೆ ನೌಕರರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;